ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 25-03-2021 ಪ್ರಶ್ನೆ ಸಂಖ್ಯೆ : 1828 (2191)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಮೋಹನ್ ಕುಮಾರ್ ಕೊಂಡಜ್ಜಿ (ನಾಮ ನಿರ್ದೇಶನ ಹೊಂದಿದವರು)

ಉತ್ತರ ನೀಡಬೇಕಾದ ದಿನಾಂಕ : 25-03-2021

ಉತ್ತರಿಸುವ ಸಚಿವರು: ಯುವ ಸಬಲೀಕರಣ ಮತ್ತು ಕ್ರೀಡೆ ಹಾಗೂ ಯೋಜನಾ ಸಚಿವರು

ವಿಷಯ : ಕರ್ನಾಟಕ ಶಾಸಕರ ಪ್ರದೇಶಾಭಿವೃದ್ಧಿ ನಿಧಿ ಯೋಜನೆಯಲ್ಲಿ ಅನುದಾನ ಬಿಡುಗಡೆ ಕುರಿತು

(ಅ) ಕರ್ನಾಟಕ ಶಾಸಕರ ಪ್ರದೇಶಾಭಿವೃದ್ಧಿ ನಿಧಿಯಲ್ಲಿ ಕಳೆದ 3 ವರ್ಷಗಳಲ್ಲಿ ಬಿಡುಗಡೆಯಾಗಿರುವ ಅನುದಾನವೆಷ್ಟು ; ಬಿಡುಗಡೆಗೆ ಬಾಕಿಯಿರುವ ಮೊತ್ತವೆಷ್ಟು ; ಬಾಕಿಯಿರಲು ಕಾರಣವೇನು ; ಯಾವಾಗ ಬಿಡುಗಡೆಗೊಳಿಸಲಾಗುವುದು ; (ವರ್ಷವಾರು ಮಾಹಿತಿ ನೀಡುವುದು)

(ಆ) ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕಳೆದ 5 ವರ್ಷಗಳಲ್ಲಿ ಕರ್ನಾಟಕ ಶಾಸಕರ ಪ್ರದೇಶಾಭಿವೃದ್ಧಿ ನಿಧಿಯಲ್ಲಿ ವಿಧಾನಸಭೆ ಹಾಗೂ ವಿಧಾನ ಪರಿಷತ್ ಶಾಸಕರಿಂದ ಎಷ್ಟು ಕಾಮಗಾರಿ ಪ್ರಸ್ತಾವನೆಗಳು ಸಲ್ಲಿಕೆಯಾಗಿವೆ ; ಕಾಮಗಾರಿಗಳನ್ನು ಅನುಷ್ಠಾನ ಸಂಸ್ಥೆಗೆ ವಹಿಸಿದ ಪ್ರಸ್ತಾವನೆಗಳ ಸಂಖ್ಯೆ ಎಷ್ಟು ; ಅಂದಾಜು ಪಟ್ಟಿ ತಯಾರಿಸಿದ ಕಾಮಗಾರಿಗಳ ಸಂಖ್ಯೆ ಎಷ್ಟು ; ಬಾಕಿಯೆಷ್ಟು;

(ಇ) ಇಲ್ಲಿಯವರೆಗೆ ಜಿಲ್ಲಾಧಿಕಾರಿ ಕಛೇರಿಯಿಂದ ಎಷ್ಟು ಕಾಮಗಾರಿಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ ; ಕಾಮಗಾರಿ ಪ್ರಾರಂಭಿಸಲು ಬಾಕಿಯಿರುವ ಕಾಮಗಾರಿಗಳು ಪೂರ್ಣಗೊಂಡು ಬಿಲ್ ಪಾವತಿಗೆ ಬಾಕಿಯಿರುವ ಕಾಮಗಾರಿಗಳ ಸಂಖ್ಯೆ ಎಷ್ಟು ; ಪೂರ್ಣಗೊಂಡಿರುವ ಕಾಮಗಾರಿಗಳ ಸಂಖ್ಯೆ ಎಷ್ಟು ; (ವರ್ಷವಾರು ಕಾಮಗಾರಿವಾರು ಏಜೆನ್ಸಿವಾರು ಮಾಹಿತಿ ನೀಡುವುದು)

(ಈ) ಈ ಪ್ರಕ್ರಿಯೆಯಲ್ಲಿ ಶಾಸಕರ ಜಿಲ್ಲಾಧಿಕಾರಿಗಳ ಏಜೆನ್ಸಿಗಳ ಪಾತ್ರವೇನು; ಕಾಮಗಾರಿ ಅನುಷ್ಠಾನ ವಿಳಂಬವಾಗಿ ಅನುದಾನ ಹಿಂಪಡೆಯುವಂತಾದಲ್ಲಿ ಯಾರನ್ನು ಹೊಣೆಗಾರರನ್ನಾಗಿ ಮಾಡಲಾಗುವುದು ; ಈ ಬಗ್ಗೆ ಸರ್ಕಾರ ತೆಗೆದುಕೊಳ್ಳುವ ಕ್ರಮವೇನು?